Akashvani: Bangalore
National Bulletin In Kannada
26.04.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

26.04.2026: 13.10hrs

********

**ಮುಖ್ಯಾಂಶಗಳು :**

1. ನಾಗರಿಕ ಪರಮಾಣು ಕ್ಷೇತ್ರದಲ್ಲಿ ಭಾರತದ ಐತಿಹಾಸಿಕ ಮೈಲಿಗಲ್ಲು; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಶಂಸೆ
2. ಬೌದ್ಧ ಧರ್ಮ ಪ್ರಚಾರದಲ್ಲಿ ನಿರತವಾಗಿರುವ ಕರ್ನಾಟಕದ ಕರ್ಮ ವಿಹಾರ ಬಗ್ಗೆ ಮನದ ಮಾತಿನಲ್ಲಿ ಪ್ರಸ್ತಾಪಿಸಿದ ಪ್ರಧಾನಿ
3. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾಗಿಯಾಗಿದ್ದ ಕಾರ್ಯಕ್ರಮದಲ್ಲಿ ಗುಂಡಿನ ದಾಳಿ; ಭದ್ರತಾ ಪಡೆಗಳಿಂದ ರಕ್ಷಣೆ
4. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಚೆನ್ನೈ ಸೂಪರ್ ಕಿಂಗ್ಸ್ -ಗುಜರಾತ್ ಟೈಟನ್ಸ್ ಹಾಗೂ ಲಖ್ನೋ ಸೂಪರ್ ಜೈಂಟ್ಸ್ - ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳ ಮುಖಾಮುಖಿ

*******

ಆಕಾಶವಾಣಿ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಲ್ಲಿಂದು ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತು ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಪ್ರಸ್ತುತ ವಿಧಾನಸಭಾ ಚುನಾವಣಾ ಪ್ರಚಾರದಲ್ಲಿ ನಿರತರಾಗಿರುವ ಸಂದರ್ಭದಲ್ಲಿ ಪತ್ರಗಳು ಮತ್ತು ಸಂದೇಶಗಳ ಮೂಲಕ, ದೇಶ ಮತ್ತು ನಾಗರಿಕರ ಸಾಧನೆಗಳ ಬಗ್ಗೆ ಪರಸ್ಪರ ಸಂತೋಷವನ್ನು ಹಂಚಿಕೊಂಡಿರುವುದಾಗಿ ಹೇಳಿದ್ದಾರೆ. ಭಾರತ ಯಾವಾಗಲೂ ದೇಶದ ಪ್ರಗತಿ ವಿಜ್ಞಾನದಿಂದ ಎಂಬುದನ್ನು ನಂಬಿದೆ. ಇದೇ ದೃಷ್ಟಿಕೋನದಿಂದ, ನಮ್ಮ ವಿಜ್ಞಾನಿಗಳು ನಾಗರಿಕ ಪರಮಾಣು ಕಾರ್ಯಕ್ರಮವನ್ನು ಮುನ್ನಡೆಸುತ್ತಿದ್ದಾರೆ. ಅವರ ಪ್ರಯತ್ನಗಳು ರಾಷ್ಟ್ರ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡುತ್ತಿವೆ. ಇದರಿಂಗಾದಿ ನಮ್ಮ ಕೈಗಾರಿಕಾ ಬೆಳವಣಿಗೆ, ಇಂಧನ ವಲಯ ಮತ್ತು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಲಾಭ ದೊರೆತಿದೆ. ಆಧುನಿಕ ನಾವೀನ್ಯಕಾರರು ಸೇರಿದಂತೆ ಎಲ್ಲರಿಗೂ ಭಾರತದ ನಾಗರಿಕ ಪರಮಾಣು ಕಾರ್ಯಕ್ರಮವು ಸಾಕಷ್ಟು ಸಹಾಯ ಮಾಡಿದೆ ಎಂದು ಹೇಳಿದರು. ಕೆಲವೇ ದಿನಗಳ ಹಿಂದೆ, ನಮ್ಮ ಪರಮಾಣು ವಿಜ್ಞಾನಿಗಳು ಪ್ರಮುಖ ಸಾಧನೆಯೊಂದಿಗೆ ಭಾರತದ ಹೆಮ್ಮೆಗೆ ಮತ್ತೊಂದು ಗರಿಯನ್ನು ಜೋಡಿಸಿದ್ದಾರೆ. ತಮಿಳುನಾಡಿನ ಕಲ್ಪಾಕಂನಲ್ಲಿರುವ

ಫಾಸ್ಟ್ ಬ್ರೀಡರ್ ರಿಯಾಕ್ಟರ್ ಕ್ರಿಟಿಕ್ಯಾಲಿಟಿ ಸಾಧಿಸಿದೆ. ಅಂದರೆ ರಿಯಾಕ್ಟರ್ ಮೊದಲ ಬಾರಿಗೆ ಸ್ವಯಂ-ಸಮರ್ಥನೀಯ ಪರಮಾಣು ಸರಪಳಿ ಕ್ರಿಯೆಯನ್ನು ಯಶಸ್ವಿಯಾಗಿ ಕಾರ್ಯಗತಗೊಳಿಸುವ ಹಂತವನ್ನು ತಲುಪಿದೆ. ಈ ಹಂತವು ರಿಯಾಕ್ಟರ್ ಕಾರ್ಯಾಚರಣೆಯ ಹಂತವನ್ನು ಪ್ರವೇಶಿಸುವುದನ್ನು ಸೂಚಿಸುತ್ತದೆ. ಇದು ನಾಗರಿಕ ಪರಮಾಣು ಶಕ್ತಿ ಪಯಣದಲ್ಲಿ ಭಾರತಕ್ಕೆ ಒಂದು ಐತಿಹಾಸಿಕ ಮೈಲಿಗಲ್ಲಾಗಿದೆ. ಇಷ್ಟೇ ಅಲ್ಲದೆ, ಪರಮಾಣು ರಿಯಾಕ್ಟರ್ ಅನ್ನು ಸಂಪೂರ್ಣವಾಗಿ ಸ್ಥಳೀಯ ತಂತ್ರಜ್ಞಾನವನ್ನು ಬಳಸಿ ನಿರ್ಮಿಸಲಾಗಿದೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ( ೩೦ ಸೆಕೆಂಡ್ಸ್) ಪರಮಾಣು

ಭಾರತದ ಪವನ ಶಕ್ತಿ ಉತ್ಪಾದನಾ ಸಾಮರ್ಥ್ಯ ಈಗ ೫೬ ಗಿಗಾವ್ಯಾಟ್‌ಗಳನ್ನು ಮೀರಿದೆ. ಕಳೆದ ಒಂದು ವರ್ಷದಲ್ಲಿ ಸುಮಾರು ೬ ಗಿಗಾವ್ಯಾಟ್‌ಗಳಷ್ಟು ಸಾಮರ್ಥ್ಯವನ್ನು ಹೊಸದಾಗಿ ಸೇರಿಸಲಾಗಿದೆ. ಪವನ ಶಕ್ತಿಯಲ್ಲಿ ಭಾರತ ವೇಗವಾಗಿ ಪ್ರಗತಿ ಸಾಧಿಸುತ್ತಿದೆ ಮತ್ತು ಜಗತ್ತು ನಮ್ಮ ಕಡೆಗೆ ದೃಷ್ಟಿ ನೆಟ್ಟಿದೆ., ಇಂದು ಭಾರತ ಪವನ ಶಕ್ತಿ ಸಾಮರ್ಥ್ಯದಲ್ಲಿ ವಿಶ್ವದಲ್ಲಿ ನಾಲ್ಕನೇ ಸ್ಥಾನದಲ್ಲಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ. ಗುಜರಾತ್, ತಮಿಳುನಾಡು, ಮಹಾರಾಷ್ಟ್ರ ಮತ್ತು ರಾಜಸ್ಥಾನ ಸೇರಿದಂತೆ ದೇಶದ ಹಲವು ರಾಜ್ಯಗಳು ಈ ವಲಯದಲ್ಲಿ ಸಾಧನೆಯನ್ನು ಮೆರೆದಿವೆ. ಹಿಂದೆ ಮರುಭೂಮಿಗಳು ಮಾತ್ರ ಗೋಚರಿಸುತ್ತಿದ್ದಂತಹ ಗುಜರಾತ್‌ನ ಕಚ್, ಪಠಾಣ್ ಮತ್ತು ಬನಾಸ್ ಕಾಂಠಾದಂತಹ ಪ್ರದೇಶಗಳು ಈಗ ದೊಡ್ಡ ನವೀಕರಿಸಬಹುದಾದ ಇಂಧನ ವಲಯಗಳಿಗೆ ನೆಲೆಯಾಗಿವೆ. ಯುವಕರು ಇದರಿಂದ ಪ್ರಯೋಜನ ಪಡೆಯುತ್ತಿದ್ದಾರೆ, ಹೊಸ ಅವಕಾಶಗಳನ್ನು ಸೃಷ್ಟಿಸಿ, ಹೊಸ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುತ್ತಿದ್ದಾರೆ ಮತ್ತು ಉದ್ಯೋಗಕ್ಕಾಗಿ ಹೊಸ ಮಾರ್ಗಗಳು ತೆರೆದುಕೊಳ್ಳುತ್ತಿವೆ ಎಂದು ಹೇಳಿದ್ದಾರೆ. ಮೇ ತಿಂಗಳು ಒಂದು ಪವಿತ್ರ ಸಂದರ್ಭದೊಂದಿಗೆ ಪ್ರಾರಂಭವಾಗಲಿದೆ. ಕೆಲವೇ ದಿನಗಳಲ್ಲಿ ನಾವು ಬುದ್ಧ ಪೂರ್ಣಿಮೆಯನ್ನು ಆಚರಿಸುತ್ತೇವೆ. ಎಲ್ಲ ದೇಶವಾಸಿಗಳಿಗೆ ಈ ಸಂದರ್ಭದಲ್ಲಿ ತಾವು ಶುಭಾಶಯ ತಿಳಿಸುವುದಾಗಿ ಹೇಳಿದ್ದಾರೆ. ಭಗವಾನ್ ಗೌತಮ ಬುದ್ಧನ ಜೀವನ ಸಂದೇಶವು ಇಂದಿಗೂ ಪ್ರಸ್ತುತವಾಗಿದೆ. ಶಾಂತಿ ನಮ್ಮೊಳಗೆ ಪ್ರಾರಂಭವಾಗುತ್ತದೆ ಎಂದು ಅವರು ನಮಗೆ ಬೋಧಿಸಿದ್ದಾರೆ. ಇಂದು ಜಗತ್ತು ಎದುರಿಸುತ್ತಿರುವ ಉದ್ವಿಗ್ನತೆ ಮತ್ತು ಸಂಘರ್ಷಗಳನ್ನು ಗಮನಿಸಿದಾಗ, ಬುದ್ಧನ ಬೋಧನೆಗಳು ಮತ್ತಷ್ಟು ಮಹತ್ವದ್ದಾಗಿವೆ ಎಂದು ಪ್ರಧಾನಿ ತಿಳಿಸಿದ್ದಾರೆ. ದಕ್ಷಿಣ ಅಮೆರಿಕಾದ ಚಿಲಿಯಲ್ಲಿರುವ ಒಂದು ಸಂಸ್ಥೆ ಭಗವಾನ್ ಬುದ್ಧನ ಬೋಧನೆಗಳನ್ನು ಪ್ರಚಾರ ಮಾಡುತ್ತಿದೆ. ಲಡಾಖ್‌ನಲ್ಲಿ ಜನಿಸಿದ ಡ್ರುಬ್ಬನ್ ಓಟ್ಟರ್ ರಿನ್‌ಪೋಚೆ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯ ಮುನ್ನಡೆಯುತ್ತಿದೆ. ಈ ಸಂಸ್ಥೆಯು ಜನರ ಜೀವನದಲ್ಲಿ ಧ್ಯಾನ ಮತ್ತು ಕರುಣೆ ಬೇರೆಯುವಂತೆ ಮಾಡುತ್ತಿದೆ. ಬೌದ್ಧ ಸಂಪ್ರದಾಯವು ನಮಗೆ ಪ್ರಕೃತಿಯೊಂದಿಗೆ ಸಂಪರ್ಕ

ಹೊಂದುವುದನ್ನು ಕಲಿಸುತ್ತದೆ. ಭಗವಾನ್ ಬುದ್ಧನಿಗೆ ಮರದ ಕೆಳಗೆ ಜ್ಞಾನೋದಯವಾಯಿತು. ಪ್ರಕೃತಿ ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ. ಕರ್ನಾಟಕದಲ್ಲಿರುವ ಕರ್ಮ ವಿಹಾರವು ಇದಕ್ಕೆ ಒಂದು ಉತ್ತಮ ಉದಾಹರಣೆಯಾಗಿದೆ. ಈ ವಿಹಾರವು ೧೦೦ ಎಕರೆಗಳಷ್ಟು ವಿಸ್ತಾರವಾದ ರೋಮಾಂಚಕ ಅರಣ್ಯವನ್ನು ಹೊಂದಿದೆ. ಈ ಅರಣ್ಯದಲ್ಲಿ ೭೦೦ಕ್ಕೂ ಹೆಚ್ಚು ಸ್ಥಳೀಯ ಮರಗಳನ್ನು ಸಂರಕ್ಷಿಸಲಾಗಿದೆ. ಬುದ್ಧನ ಸಂದೇಶವು ಕೇವಲ ಭೂತಕಾಲಕ್ಕೆ ಸೀಮಿತವಾಗಿಲ್ಲ. ಅದು ಇಂದಿಗೂ ಪ್ರಸ್ತುತವಾಗಿದೆ ಮತ್ತು ಭವಿಷ್ಯಕ್ಕೆ ಕೂಡಾ ಅವಶ್ಯಕವಾಗಿದೆ. ಬುದ್ಧ ಪೂರ್ಣಿಮೆಯ ಈ ಸಂದರ್ಭವು ಸ್ಫೂರ್ತಿದಾಯಕವಾಗಿದೆ. ನಮ್ಮ ಜೀವನದಲ್ಲಿ ಶಾಂತಿಯನ್ನು ಹೆಚ್ಚಿಸೋಣ, ಕರುಣೆಯನ್ನು ಅಳವಡಿಸಿಕೊಳ್ಳೋಣ ಮತ್ತು ಸಮತೋಲನದಿಂದ ಮುಂದುವರಿಯೋಣ ಎಂದು ಹೇಳಿದರು. ದೇಶದಲ್ಲಿ ಈಗ ಒಂದು ಮುಖ್ಯವಾದ ಜನಗಣತಿ ಅಭಿಯಾನ ನಡೆಯುತ್ತಿದ್ದು, ಈ ಕುರಿತಂತೆ ಪ್ರತಿಯೊಬ್ಬ ಭಾರತೀಯನೂ ತಿಳಿದಿರಲೇ ಬೇಕು. ಇದೇ ಜನಗಣತಿ ಅಭಿಯಾನ, ಇದು ವಿಶ್ವದ ಅತಿದೊಡ್ಡ ಜನಗಣತಿಯಾಗಿದೆ. ಈಗಾಗಲೇ ಇತರ ಜನಗಣತಿಯಲ್ಲಿ ಪಾಲ್ಗೊಂಡಿರುವವರಿಗೂ, ಈ ಬಾರಿಯ ಜನಗಣತಿ ಅವರ ಮೊದಲಿನ ಅನುಭವಕ್ಕಿಂತ ಭಿನ್ನವಾಗಿರಲಿದೆ. ಜನಗಣತಿ ೨೦೨೭ ಅನ್ನು ಡಿಜಿಟಲ್ ಮಾಡಲಾಗಿದೆ. ಎಲ್ಲಾ ಮಾಹಿತಿಯನ್ನು ನೇರವಾಗಿ ಡಿಜಿಟಲ್ ಮಾಧ್ಯಮ ಮೂಲಕ ದಾಖಲಿಸಲಾಗುತ್ತಿದೆ. ಮನೆ ಮನೆಗೆ ತೆರಳುವ ಸಿಬ್ಬಂದಿಗಳ ಬಳಿ ಮೊಬೈಲ್ ಆಪ್ ಇರುತ್ತದೆ. ಅವರು ನಿಮ್ಮೊಂದಿಗೆ ಮಾತನಾಡಿ, ಮಾಹಿತಿಯನ್ನು ಅದರಲ್ಲೇ ದಾಖಲಿಸುತ್ತಾರೆ. ದೇಶದ ಜನಗಣತಿ ಕೇವಲ ಸರ್ಕಾರಿ ಕೆಲಸವಲ್ಲ. ಅದು ನಮ್ಮೆಲ್ಲರ ಜವಾಬ್ದಾರಿ. ನಿಮ್ಮ ಭಾಗವಹಿಸುವಿಕೆ ಬಹಳ ಮುಖ್ಯ. ನೀವು ನೀಡಿದ ಮಾಹಿತಿಯು ಸಂಪೂರ್ಣವಾಗಿ ಸುರಕ್ಷಿತವಾಗಿರುತ್ತದೆ, ಅದನ್ನು ಗೌಪ್ಯವಾಗಿ ಇರಿಸಲಾಗುತ್ತದೆ ಅದನ್ನು ಡಿಜಿಟಲ್ ಭದ್ರತೆಯಿಂದ ರಕ್ಷಿಸಲಾಗುತ್ತದೆ. ನಾವೆಲ್ಲರೂ ಒಟ್ಟಾಗಿ ಈ ಪ್ರಕ್ರಿಯೆಯಲ್ಲಿ ಭಾಗವಹಿಸಿ, ಜನಗಣತಿ ೨೦೨೭ ಅನ್ನು ಯಶಸ್ವಿಗೊಳಿಸೋಣ ಎಂದು ಜನತೆಗೆ ಕರೆ ನೀಡಿದರು.

*******

ವಾಷಿಂಗ್ಟನ್‌ನ ಹಿಲ್ಟನ್‌ನಲ್ಲಿ ನಡೆದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾಗವಹಿಸಿದ್ದ ಶ್ವೇತಭವನದ ವರದಿಗಾರರ ಸಂಘದ ಭೋಜನ ಕೂಟದಲ್ಲಿ ಗುಂಡಿನ ದಾಳಿ ನಡೆದಿದೆ ಎಂದು ವರದಿಯಾಗಿದೆ. ಆವರಣದಲ್ಲಿ ದೊಡ್ಡ ಗುಂಡಿನ ಶಬ್ದ ಕೇಳಿದ ನಂತರ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅವರ ಪತ್ನಿ ಮೆಲಾನಿಯಾ ಟ್ರಂಪ್ ಮತ್ತು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರನ್ನು ಭದ್ರತಾ ತಂಡಗಳು ತಕ್ಷಣವೇ ಹೊರಗೆ ಕರೆದೊಯ್ದು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದವು. ಶ್ವೇತಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಎರಡೂ ಪಕ್ಷಗಳ ಸದಸ್ಯರು ಮತ್ತು ಮಾಧ್ಯಮಗಳನ್ನು ಒಟ್ಟುಗೂಡಿಸಲು ಉದ್ದೇಶಿಸಲಾದ ವಾಕ್ ಸ್ವಾತಂತ್ರ್ಯಕ್ಕೆ

ಮೀಸಲಾದ ಕಾರ್ಯಕ್ರಮದಲ್ಲಿ ಈ ಘಟನೆ ಸಂಭವಿಸಿದೆ ಎಂದು ತಿಳಿಸಿದ್ದಾರೆ. ಸಶಸ್ತ್ರ ದಾಳಿಕೋರನ ವಿರುದ್ಧ ರಹಸ್ಯ ಸೇವೆ ಮತ್ತು ಕಾನೂನು ಜಾರಿ ಸಂಸ್ಥೆಗಳು ನಡೆಸಿದ ಕಾರ್ಯಚರಣೆಯನ್ನು ಶ್ಲಾಘಿಸಿದ್ದಾರೆ. ಘಟನೆಯಲ್ಲಿ ಒಬ್ಬ ಅಧಿಕಾರಿಗೆ ಹತ್ತಿರದಿಂದ ಗುಂಡು ಹಾರಿಸಲಾಯಿತು. ಆದರೆ ಗುಂಡು ನಿರೋಧಕ ಜಾಕೆಟ್‌ನಿಂದ ಅವರು ಬದುಕುಳಿದಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ. ಘಟನೆಯ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅವರ ಪತ್ನಿ ಮೆಲಾನಿಯಾ ಟ್ರಂಪ್ ಮತ್ತು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರು ಅಪಾಯದಿಂದ ಪಾರಾಗಿರುವ ಬಗ್ಗೆ ಸಮಾಧಾನ ವ್ಯಕ್ತಪಡಿಸಿದ್ದು, ನಿರಂತರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕಾಗಿ ಶುಭ ಹಾರೈಸಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಹಿಂಸಾಚಾರಕ್ಕೆ ಸ್ಥಾನವಿಲ್ಲ ಮತ್ತು ಅದನ್ನು ಖಂಡಿಸಬೇಕು ಎಂದು ಪ್ರಧಾನಿ ಹೇಳಿದರು.

*******

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ೨ ಪಂದ್ಯಗಳು ಆಯೋಜನೆಗೊಂಡಿದೆ. ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕಾನ ಕ್ರೀಡಾಂಗಣದಲ್ಲಿ ಇಂದು ಸಂಜೆ ೭.೩೦ಕ್ಕೆ ಪ್ರಾರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ಲಖ್ನೋ ಸೂಪರ್ ಜೈಂಟ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಸೆಣಸಲಿವೆ.

******